<u>ಮಿಸ್. ನಂ.02/2020 ರಲ್ಲಿ</u>
ಪಿ.ಡಬ್ಲ್ಯೂ-1(ಶಿವಲಿಂಗಣ್ಣ)

ದಿನಾಂಕ 29.11.2023 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದಃ-</u>

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

2. ಅಸಲುದಾವಾ ಸಂಖ್ಯೆ 121/2014 ರ ತೀರ್ಪಿನ ಹಾಗೂ ಡಿಕ್ರಿಯ ದೃಢೀಕೃತ ನಕಲುಗಳನ್ನು ಕ್ರಮವಾಗಿ ನಿಪಿ-1 ಮತ್ತು ನಿಪಿ-2, ಸದರಿ ದಾವೆಯ ಆದೇಶ ಪುಟದ ದೃಢೀಕೃತ ನಕಲನ್ನು ನಿಪಿ-3, ಸದರಿ ದಾವೆಯಲ್ಲಿನ ಮೌಲ್ಯೀಕರಣ ಪಟ್ಟಿಯ ದೃಢೀಕೃತ ನಕಲನ್ನು ನಿಪಿ-4, ಸದರಿ ದಾವೆಯಲ್ಲಿನ ಅಂಚೆ ಸ್ವೀಕೃತಿಗಳ ದೃಢೀಕೃತ ನಕಲನ್ನು ನಿಪಿ-5, ಸದರಿ ದಾವೆಯಲ್ಲಿನ 3 ರಿಂದ 11 ನೇ ಪ್ರತಿವಾದಿಗಳ ಸಮನ್ಸ್ ನ ದೃಢೀಕೃತ ನಕಲನ್ನು ನಿಪಿ-6 ಎಂದು ಗುರುತಿಸಲಾಯಿತು. ಅರ್ಜಿಯನ್ನು ಪುರಸ್ಕರಿಸುವಂತೆ ಕೋರುತ್ತೇನೆ.

<u>ಪಾಟೀ ಸವಾಲುಃ-</u>

ಎದುರುದಾರರು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ನ್ಯಾಯತಾ ದೃಷ್ಟಿಯಿಂದ ಪಾಟೀ ಸವಾಲಿಗೆ ಅವಕಾಶ ನೀಡಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಸರಸ್ವತಿ ಕೆ.ಎನ್.)
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.